# <u>ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು</u>

**ವಿಷಯ:** 2018–19ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ **<u>ಮೈಸೂರು ವಿಭಾಗದ</u>** ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪ.ಪೂ ಕಾಲೇಜು/ಮಾದರಿ ವಸತಿ ಶಾಲೆ(ನವೋದಯ) ಸರ್ಕಾರಿ ಮುಸ್ಲಿಂ ವಸತಿಶಾಲೆಗಳ ಅತಿಥಿ ಶಿಕ್ಷಕರು ಹಾಗೂ **"ಡಿ"** ವೃಂದ ಹೊರಗುತ್ತಿಗೆ ಸಿಬ್ಬಂದಿಗಳ ವೇತನ ಪಾವತಿಸಲು 1ನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1) **ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ** 257 **ಎಂಡಿಎಸ್** 2018 **ದಿನಾಂಕ:** 06.04.2018
2) **ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ** 257 **ಎಂಡಿಎಸ್** 2018 **ದಿನಾಂಕ:** 11.04.2018

******

<u>ಪ್ರ ಸ್ತಾ ವ ನೆ:-</u>

**ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ 2017-18ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2018-19ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆಗೆ ಮೊದಲನೇ ತ್ರೈಮಾಸಿಕ ಕಂತಾಗಿ ರೂ.3576.64 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.**

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಸೂರು ವಿಭಾಗದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಸರ್ಕಾರಿ ಮುಸ್ಲಿಂ ವಸತಿಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ, **"ಡಿ"** ವೃಂದದ ಹೊರಗುತ್ತಿಗೆ ಸಿಬ್ಬಂದಿಗಳ ಹಾಗೂ ಕಾವಲುಗಾರರ ವೇತನ ಪಾವತಿಸಲು ಅನುಬಂಧದಲ್ಲಿ ನಮೂದಿಸಿರುವಂತೆ ಶಾಲಾವಾರು ಅನುದಾನವನ್ನು ಮೊದಲನೇಯ ತ್ರೈಮಾಸಿಕ ಕಂತಾಗಿ ಒಟ್ಟು ರೂ.62.00 ಲಕ್ಷ (ಅರವತ್ತೆರಡು ಲಕ್ಷ ರೂಪಾಯಿಗಳು) ಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## <u>ಆದೇಶ</u>

**ಸಂಖ್ಯೆ: ಅಸಂನಿ/ಆ/ವಶಾ/ಹೊ.ಸಂ/ಸಿಆರ್-87/ಮೈ/2018-19** **ದಿನಾಂಕ: 15.05.2018**

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ ಮೈಸೂರು ವಿಭಾಗದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಸರ್ಕಾರಿ ಮುಸ್ಲಿಂ ವಸತಿಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ, **"ಡಿ"** ವೃಂದದ ಹೊರಗುತ್ತಿಗೆ ಸಿಬ್ಬಂದಿಗಳ ಹಾಗೂ ಕಾವಲುಗಾರರ ವೇತನ ಪಾವತಿಸಲು ಅನುಬಂಧದಲ್ಲಿ ನಮೂದಿಸಿರುವಂತೆ ಶಾಲಾವಾರು ಅನುದಾನವನ್ನು ಮೊದಲನೇಯ ತ್ರೈಮಾಸಿಕ ಕಂತಾಗಿ ರೂ.62.00 ಲಕ್ಷ (ಅರವತ್ತೆರಡು ಲಕ್ಷ ರೂಪಾಯಿಗಳು) ಗಳನ್ನು ಆಯಾ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ** ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

**ನಿಬಂಧನೆಗಳು:-**

1) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಕಡ್ಡಾಯವಾಗಿ ಮೇಲ್ಕಂಡ ಅವಧಿಯ ವಸತಿ ಶಾಲೆಗಳ ಅತಿಥಿ ಶಿಕ್ಷಕರು ಹಾಗೂ ಕಾವಲುಗಾರರ ವೇತನ ಪಾವತಿಗೆ ಮಾತ್ರ ಭರಿಸತಕ್ಕದ್ದು.(ಹಿಂದಿನ ವರ್ಷದ ಬಾಕಿ ಬಿಲ್ಲುಗಳನ್ನು ಭರಿಸವಂತಿಲ್ಲ)
2) ಹೊರಗುತ್ತಿಗೆ ಸಿಬ್ಬಂದಿಗಳ ವೇತನವನ್ನು ಸಂಬಂಧಪಟ್ಟ ವಸತಿ ಶಾಲೆ/ಕಾಲೇಜುಗಳಿಗೆ ಮಂಜೂರಾಗಿರುವ ಹುದ್ದೆಗಳ ಹಾಗೂ ನೈಜ ಹಾಜರಾತಿ ಅನುಗುಣವಾಗಿ ಪಾವತಿಸತಕ್ಕದ್ದು.
3) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೇ, ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.

Contd...2

4) ಅತಿಥಿ ಶಿಕ್ಷಕರು ಹಾಗೂ "ಡಿ" ವೃಂದದ ಸಿಬ್ಬಂದಿಗಳ ಎಪ್ರಿಲ್–2018 ಮಾಹೆಯ ವೇತನ (ಪಡೆದಿದ್ದಲ್ಲಿ) ಜೂನ್, ಜುಲೈ ತಿಂಗಳುಗಳ ವೇತನ ಹಾಗೂ ಕಾವಲುಗಾರರ ಎಪ್ರೀಲ್–2018 ರಿಂದ ಜುಲೈ–2018 ರವರೆಗೂ ವೇತನ ಪಾವತಿಸಲು ಸೂಚಿಸಿದೆ.
5) ಹೊರಗುತ್ತಿಗೆ ಸಿಬ್ಬಂದಿಗಳ ವೇತನಕ್ಕೆ ಪ್ರತಿ ಶಾಲಾ/ಕಾಲೇಜಿಗೆ ಅಂದಾಜು Lump Sum ಅನುದಾನ ಬಿಡುಗಡೆಗೊಳಿಸಿದೆ. ಮುಂದಿನ ಬಾರಿ ನೈಜ ಹೊರಸಂಪನ್ಮೂಲ ಸಂಸ್ಥೆಗಳ ಬಿಲ್ ಪರಿಗಣಿಸಿ ಅನುದಾನ ಬಿಡುಗಡೆ ಮಾಡಲಾಗುವುದು.
6) ಹೊರಗುತ್ತಿಗೆ ಸಿಬ್ಬಂದಿಗಳನ್ನು ಕಡ್ಡಾಯವಾಗಿ ಕೆ.ಟಿ.ಪಿ.ಪಿ ಕಾಯ್ದೆ ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ನಂತರ ಹೊರಸಂಪನ್ಮೂಲ ಎಜೆನ್ಸಿ ಮೂಲಕ ಪಡೆದಿರಬೇಕು.
7) ಹೊರಸಂಪನ್ಮೂಲ ಎಜೆನ್ಸಿಗೆ ಬಿಲ್ಲು ಪಾವತಿಸುವ ಮೊದಲು ನೌಕರರ ಬ್ಯಾಂಕ್ ಖಾತೆಗೆ ವೇತನ ಜಮಾ ಆಗಿರುವ ಹಾಗೂ ನಿಯಮಾನುಸಾರ PF,ESI,Service Tax ಮುಂತಾದ ಶಾಸನ ಬದ್ಧ ಕಟಾವಣೆಗಳು ಸಂಬಂಧಪಟ್ಟ ಇಲಾಖೆಗಳಿಗೆ ಜಮಾ ಆಗಿರುವ ಬಗ್ಗೆ, ಖಚಿತ ಪಡಿಸಿಕೊಳ್ಳತಕ್ಕದ್ದು.
8) ಆಬ್ಜೆಕ್ಟ್ ಕೋಡ್ (034) ಅಡಿ ಕೇವಲ ಹೊರಗುತ್ತಿಗೆ ಸಿಬ್ಬಂದಿಗಳ ವೇತನದ ವೆಚ್ಚ ಮಾತ್ರ ಭರಿಸಬಹುದಾಗಿದ್ದು, ಯಾವುದೇ ಶಾಲಾ/ಕಾಲೇಜಿನಲ್ಲಿ ಅನುದಾನ ಉಳಿದರೆ ತಕ್ಷಣ ನಿರ್ದೇಶನಾಲಯಕ್ಕೆ ತಿಳಿಸುವುದು.
9) ಹೆಚ್ಚುವರಿ ಅನುದಾನ ಬೇಕಾದಲ್ಲಿ ನಿರ್ದೇಶನಾಲಯಕ್ಕೆ ಬೇಡಿಕೆ ಸಲ್ಲಿಸುವುದು (ಬಿಲ್/ದಾಖಲಾತಿ ಸಮೇತ).
10) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಕಛೇರಿಗಳಲ್ಲಿ ಅಥವಾ ವಸತಿಶಾಲೆಗಳ ಪ್ರಾಂಶುಪಾಲರಿಗೆ ನಿಯಮಾನುಸಾರ ಮರುಬಿಡುಗಡೆಗೊಳಿಸಿ ಖರ್ಚು ಭರಿಸತಕ್ಕದ್ದು.
11) ಶಾಲೆ/ಕಾಲೇಜುಗಳಿಗೆ ಮಂಜೂರಾದ ಹುದ್ದೆ ಹೊರತಾಗಿ ಹೆಚ್ಚುವರಿ ಸಿಬ್ಬಂದಿಗಳನ್ನು ಪಡೆದರೆ ಅದಕ್ಕೆ ನೇರವಾಗಿ ಕಛೇರಿ ಮುಖ್ಯಸ್ಥರನ್ನು ಹೊಣೆಗಾರರನ್ನಾಗಿ ಮಾಡಿ ಅವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದು.
12) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನ ಭರಿಸಿದ ವಿವರ ಪ್ರತಿ ತಿಂಗಳು 10ನೇ ತಾರೀಖಿನ ಒಳಗೆ (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಆಬ್ಜೆಕ್ಟ್ ಕೋಡ್ (034) ಲೆಕ್ಕಶೀರ್ಷಿಕೆ 2225–03–277–2–80 ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆ 2018–19ನೇ ಸಾಲಿನಲ್ಲಿ ಒದಗಿಸಿರುವ ಆಯವಯ್ಯದಲ್ಲಿ ಭರಿಸುವುದು.

(ಅಕ್ರಂ ಪಾಷ)
ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಯನ್ನು:–

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ–3, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ– ಅಗತ್ಯಕ್ರಮಕ್ಕಾಗಿ ಹಾಗೂ ಪ್ರಾಂಶುಪಾಲರಿಗೆ (ಜಿಲ್ಲಾ ಅಧಿಕಾರಿಗಳ ಮೂಲಕ)
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು.
7. ಲೆಕ್ಕಪತ್ರ ಶಾಖೆ.
8. ಹೆಚ್ಚುವರಿ ಪ್ರತಿ/ಕಛೇರಿ ಪ್ರತಿ.